

# ಗುಣಮಟ್ಟದ ಆರೋಗ್ಯಕ್ಕೆ ಒತ್ತು

-ಡಾ.ಕೆ. ಸುಧಾಕರ್
ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ

ಆಯುಷ್ಮಾನ್ ಭಾರತ್

**◆ ಆಯುಷ್ಮಾನ್ ಭಾರತಆರೋಗ್ಯ ಮತ್ತು ಕ್ಷೇಮ ಕೇಂದ್ರಗಳ ಯೋಜನೆಗೆ ರಾಜ್ಯದಲ್ಲಿ ಯಾವ ರೀತಿ ಪ್ರತಿಕ್ರಿಯೆ ವ್ಯಕ್ತವಾಗಿದೆ? ಯಾರೆಲ್ಲ ಇದರ ಸೌಲಭ್ಯ ಪಡೆದುಕೊಳ್ಳಬಹುದು?**

ನವ ಭಾರತದಡಿ ನವ ಕರ್ನಾಟಕ ನಿರ್ಮಿಸುವ ಗುರಿಯೊಂದಿಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ರಾಜ್ಯ ಸರ್ಕಾರ ಮುನ್ನಡೆದಿದೆ. ಇದೇ ಗುರಿಯಲ್ಲಿ ಆರೋಗ್ಯ ಕರ್ನಾಟಕವನ್ನು ನಿರ್ಮಿಸುವ ಉದ್ದೇಶವೂ ಇದೆ. ಇದಕ್ಕಾಗಿ ರಾಜ್ಯ ಸರ್ಕಾರ ಆರೋಗ್ಯ ಮೂಲಸೌಕರ್ಯಗಳನ್ನು ವೇಗವಾಗಿ ಅಭಿವೃದ್ಧಿಪಡಿಸುತ್ತಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರವು ಎಲ್ಲಾ ರಾಜ್ಯಗಳಲ್ಲಿ ಆರೋಗ್ಯ ಮೂಲಸೌಕರ್ಯವನ್ನು ಸುಧಾರಿಸುವ ಹಾಗೂ ಸಾಮಾನ್ಯ ಜನರ ಆರೋಗ್ಯ ಸೇವೆಗೆ ವೇಗ ನೀಡುವ ಉದ್ದೇಶದಿಂದ ಆಯುಷ್ಮಾನ್ ಭಾರತ್ ಯೋಜನೆ ಜಾರಿ ಮಾಡಿದೆ. ಈ ಯೋಜನೆಯಲ್ಲಿ, ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳನ್ನು ನಿರ್ಮಿಸುವ ಮೂಲಕ ಗ್ರಾಮೀಣ ಪ್ರದೇಶದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ನೀಡಲು ಹೆಜ್ಜೆ ಇರಿಸಲಾಗಿದೆ. ಈ ಯೋಜನೆಗೆ ರಾಜ್ಯದಲ್ಲಿ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮೀಣ ಜನರು ಆರೋಗ್ಯ ಸೇವೆಯನ್ನು ಪಡೆಯುತ್ತಿದ್ದಾರೆ.

ಗಂಭೀರ ಸ್ವರೂಪದ ಕಾಯಿಲೆಗಳು 1/3 ಭಾಗದ ಜನಸಂಖ್ಯೆಯನ್ನು ಆರ್ಥಿಕ ಸಂಕಷ್ಟ ಅಥವಾ ಸಾಲದ ಕೂಪಕ್ಕೆ ತಳ್ಳುತ್ತಿವೆ. ಇದನ್ನು ತಡೆಯುವುದು ಸರ್ಕಾರದ ಗುರಿ. ಇದಕ್ಕಾಗಿ ಪ್ರಸಕ್ತ ಅಸ್ತಿತ್ವದಲ್ಲಿರುವ 11,595 ಆರೋಗ್ಯ ಕೇಂದ್ರಗಳನ್ನು ಆರೋಗ್ಯ ಮತ್ತು ಕ್ಷೇಮ ಕೇಂದ್ರವಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿದೆ. 2022 ರ ಜನವರಿ 31 ರವರೆಗೆ, 6,995 ಕೇಂದ್ರಗಳನ್ನು ಆರೋಗ್ಯ ಮತ್ತು ಕ್ಷೇಮ ಕೇಂದ್ರವಾಗಿ ಮೇಲ್ದರ್ಜೆಗೇರಿಸಿದ್ದು, ಒಟ್ಟು ಶೇ.125 ರಷ್ಟು ಸಾಧನೆ ಮಾಡಲಾಗಿದೆ.

ಆರೋಗ್ಯ ಇಲಾಖೆಯಡಿ, 8,871 ಉಪಕೇಂದ್ರಗಳಿದ್ದು, 2021–22 ನೇ ಸಾಲಿಗೆ 4,664 ಕೇಂದ್ರಗಳನ್ನು ಆರೋಗ್ಯ ಮತ್ತು ಕ್ಷೇಮ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಗುರಿಯನ್ನು ಕೇಂದ್ರ ಸರ್ಕಾರ ನೀಡಿತ್ತು. ಈ ಪೈಕಿ 4,464 ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಶೇ.96 ರಷ್ಟು ಸಾಧನೆ ಮಾಡಲಾಗಿದೆ. 2,359 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪೈಕಿ, 2,228 ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಗುರಿಯನ್ನು ಕೇಂದ್ರ ಸರ್ಕಾರ ನಿಗದಿ ಮಾಡಿದ್ದು, 2,166 ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಶೇ.98 ರಷ್ಟು ಸಾಧಿಸಲಾಗಿದೆ. 365 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಲ್ಲವನ್ನೂ ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರ ಗುರಿ ನೀಡಿದ್ದು, 364 ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗಿದೆ. ಅಂದರೆ, ಒಟ್ಟು 11,595 ಕೇಂದ್ರಗಳ ಪೈಕಿ, 7,257 ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರ ಗುರಿ ವಹಿಸಿದ್ದು, 6,995 ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗಿದೆ.

ಈ ಯೋಜನೆಯ ಅನುಷ್ಠಾನದಲ್ಲಿ ಕರ್ನಾಟಕ ರಾಜ್ಯವು 2020–21 ನೇ ಸಾಲಿನಲ್ಲಿ ಪ್ರಥಮ ಸ್ಥಾನದಲ್ಲಿತ್ತು ಎಂಬುದು ಹೆಮ್ಮೆಯ ಸಂಗತಿ. ಸರ್ಕಾರ ಹಾಗೂ ಅಧಿಕಾರಿಗಳ ಒಟ್ಟು ಪ್ರಯತ್ನ ಈ ಹೆಗ್ಗಳಿಕೆಯನ್ನು ರಾಜ್ಯಕ್ಕೆ ತಂದಿದೆ.

**◆ ಈ ಯೋಜನೆಯಡಿ ಸೇವೆ ಪಡೆದುಕೊಳ್ಳುವುದು ಹೇಗೆ?**

ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು, ಈಗಿನ ಪ್ರಾಥಮಿಕ ಆರೋಗ್ಯ ಕೇಂದ್ರ ಅಥವಾ ಸಮುದಾಯ ಆರೋಗ್ಯ ಕೇಂದ್ರದ ಮುಂದುವರಿದ ಭಾಗ. ಅಂದರೆ ಉನ್ನತೀಕರಣಗೊಂಡ ಆಸ್ಪತ್ರೆಗಳು. ಇಲ್ಲಿ ತಾಯಿ ಮತ್ತು ಮಗುವಿನ ಆರೋಗ್ಯ ಸೇವೆಗಳು, ಮಾನಸಿಕ ಆರೋಗ್ಯ ಸೇವೆ, ಸಾಂಕ್ರಾಮಿಕ ಮತ್ತು ಅಸಾಂಕ್ರಾಮಿಕ ರೋಗಗಳ ತಪಾಸಣೆ ಹಾಗೂ ಚಿಕಿತ್ಸೆ ಒದಗಿಸಲಾಗುತ್ತದೆ. ಉಚಿತ ಡಯಾಗ್ನೋಸ್ಟಿಕ್ಸ್, ಔಷಧಿಗಳು ಹಾಗೂ ಅಗತ್ಯ ಸೇವೆಗಳನ್ನು ಒದಗಿಸುವ ಮೂಲಕ ಸಮುದಾಯಗಳು ಆರೋಗ್ಯಕ್ಕಾಗಿ ಅನವಶ್ಯಕವಾಗಿ ಖರ್ಚು ಮಾಡುವುದನ್ನು ತಪ್ಪಿಸಲಾಗುತ್ತದೆ. ಹಾಗೆಯೇ ಈ ಕೇಂದ್ರಗಳಿಂದ ರೆಫರಲ್ ಸೇವೆಯನ್ನೂ ನೀಡಲಾಗುತ್ತಿದೆ.

ಗ್ರಾಮೀಣ ಭಾಗದ ಜನರು ಯಾವುದೇ ದುಬಾರಿ ಖರ್ಚು ಮಾಡಲು ಬೇರೆ ಆಸ್ಪತ್ರೆಗಳಿಗೆ ತೆರಳದೆ ಇಲ್ಲಿಯೇ ಸುಲಭವಾಗಿ ಖರ್ಚಿಲ್ಲದೆ ಸೇವೆ ಪಡೆಯಬಹುದು.

**◆ ಈ ಯೋಜನೆ ಪ್ರಾರಂಭ ಆದಾಗಿನಿಂದ ರಾಜ್ಯದಲ್ಲಿ ಈವರೆಗೆ ಎಷ್ಟು ಮಂದಿ ಪ್ರಯೋಜನ ಪಡೆದುಕೊಂಡಿದ್ದಾರೆ? ಯಾವೆಲ್ಲ ಚಿಕಿತ್ಸೆಗೆ ಯೋಜನೆ ಸಹಕಾರಿ?**

ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಗ್ರಾಮೀಣ ಭಾಗಗಳ ಜನರು ಸೇವೆ ಪಡೆಯುತ್ತಿದ್ದಾರೆ. 2021–22 ನೇ ಸಾಲಿನಲ್ಲಿ ಈ ಕೇಂದ್ರಗಳಲ್ಲಿ 6,48,06,375 ಜನರು ಹೊರರೋಗಿಗಳಾಗಿ ಸೇವೆ ಪಡೆದಿದ್ದಾರೆ. 5.83 ಕೋಟಿ ಜನರು ಔಷಧಿಗಳನ್ನು ಪಡೆದಿದ್ದಾರೆ. 2.11 ಕೋಟಿ ಜನರು ರೋಗ ಪತ್ತೆ ಡಯಾಗ್ನೋಸ್ಟಿಕ್ಸ್, 99.09 ಲಕ್ಷ ಜನರು ರಕ್ತದೊತ್ತಡ ತಪಾಸಣೆ, 1.92 ಲಕ್ಷ ಜನರು ರಕ್ತದೊತ್ತಡ ಸಮಸ್ಯೆಗೆ ಚಿಕಿತ್ಸೆ, 85.49 ಲಕ್ಷ ಜನರು ಮಧುಮೇಹ ತಪಾಸಣೆ, 1.55 ಲಕ್ಷ ಜನರು ಮಧುಮೇಹ ಚಿಕಿತ್ಸೆ, 12.88 ಲಕ್ಷ ಜನರು ಸ್ತನ ಕ್ಯಾನ್ಸರ್ ತಪಾಸಣೆ, 452 ರೋಗಿಗಳು ಸ್ತನ ಕ್ಯಾನ್ಸರ್ ಚಿಕಿತ್ಸೆ, 10.40 ಲಕ್ಷ ಜನರು ಗರ್ಭ ಕಂಠದ ಕ್ಯಾನ್ಸರ್ ಚಿಕಿತ್ಸೆ ಹಾಗೂ 519 ರೋಗಿಗಳು ಗರ್ಭ ಕಂಠದ ಕ್ಯಾನ್ಸರ್ ಗೆ ಚಿಕಿತ್ಸೆ ಪಡೆದಿದ್ದಾರೆ.

ಇಷ್ಟೊಂದು ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇವೆ ಪಡೆಯುತ್ತಿರುವುದನ್ನು ಗಮನಿಸಿದರೆ, ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳ ಉದ್ದೇಶ ಬಹುತೇಕ ಯಶಸ್ವಿಯಾಗಿದೆ. ಕೋವಿಡ್ ಆರಂಭವಾದಾಗಿನಿಂದ ಬೇರೆ ರೋಗಗಳ ಚಿಕಿತ್ಸೆಗೆ, ತಪಾಸಣೆಗೆ ಬಹಳ ಕಷ್ಟವಾಗಿತ್ತು ಎಂಬುದು ನಮಗೆಲ್ಲಾ ತಿಳಿದಿದೆ. ಆದರೂ ಈ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು ಉತ್ತಮವಾಗಿ ಸೇವೆ ನೀಡಿವೆ.

**◆ ಆಯುಷ್ಮಾನ್ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳ ನಿರ್ಮಾಣದ ಉದ್ದೇಶ ಏನು?**

ಸಾರ್ವತ್ರಿಕ ಆರೋಗ್ಯ ಸೇವೆಗಳನ್ನು ಬಲಪಡಿಸುವ ಉದ್ದೇಶದಿಂದ 2016–17 ರಲ್ಲಿ, ಮೈಸೂರು ಜಿಲ್ಲೆಯ ಟಿ.ನರಸೀಪುರ ತಾಲೂಕು ಹಾಗೂ ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲೂಕಿನಲ್ಲಿ ಕ್ಷೇಮ ಕೇಂದ್ರವನ್ನು ಆರಂಭಿಸಲಾಯಿತು. ಪ್ರಾಥಮಿಕ ಆರೋಗ್ಯ ಸೇವೆಗಳನ್ನು ಬಲಪಡಿಸಿ ಸಮುದಾಯಕ್ಕೆ ಸೂಕ್ತವಾಗಿ ಲಭ್ಯವಾಗುವಂತೆ ನೋಡಿಕೊಳ್ಳುವುದು ಹಾಗೂ ಕುಟುಂಬದ ಆರೋಗ್ಯ ಆರ್ಥಿಕ ಹೊರೆಯನ್ನು ತಗ್ಗಿಸುವುದು ಇದರ ಉದ್ದೇಶ.

ನಮ್ಮಲ್ಲಿ ಜನರು ಆರೋಗ್ಯಕ್ಕಾಗಿ ಬಹಳಷ್ಟು ಹಣ ಖರ್ಚು ಮಾಡುತ್ತಿದ್ದಾರೆ. ದುಡಿದ ಹಣದ ಅರ್ಧಕ್ಕಿಂತಲೂ ಅಧಿಕ ಭಾಗ ಆರೋಗ್ಯವನ್ನು ಪಡೆಯಲು ಖರ್ಚಾಗುತ್ತಿದೆ. ಇದು ಬಡ ಹಾಗೂ ಮಧ್ಯಮ ವರ್ಗದ ಆರ್ಥಿಕ ಸ್ಥಿತಿಯ ಮೇಲೆ ಬಹಳ ದುಷ್ಪರಿಣಾಮ ಬೀರಿದೆ. ಈ ಎಲ್ಲಾ ಸೂಕ್ಷ್ಮಗಳನ್ನು ಅರ್ಥ ಮಾಡಿಕೊಂಡೇ ಆರೋಗ್ಯ ಸೇವೆಯಲ್ಲಿ ಇಂತಹ ಸುಧಾರಣೆಗಳನ್ನು ತರಲಾಗುತ್ತಿದೆ. ■